# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಅಗ್ರಹಾರ ದಾಸರಹಳ್ಳಿ ವಾರ್ಡ್ ಸಂಖ್ಯೆ: 105

ಸಂ : ಸ.ಅ(ವಾ–105)/ಪಿ.ಆರ್/ 31 /2021–22 ದಿನಾಂಕ: 20/11/2021

## ವಾರ್ಡ್ ಸಮಿತಿ ಸಭೆಯ ನಡವಳಿ

ದಿನಾಂಕ: 20–11–2021 ರಂದು ವಾರ್ಡ್ ಸಂಖ್ಯೆ: 105 **ಅಗ್ರಹಾರ ದಾಸರಹಳ್ಳಿ ವಾರ್ಡ್** ನಲ್ಲಿ ಶ್ರೀ ಶಿವಸ್ವಾಮಿ ಮಾನ್ಯ ಜಂಟಿ ಆಯುಕ್ತರು(ಪ) ಬಿಬಿಎಂಪಿ ಹಾಗೂ ವಾರ್ಡ್ ನಂ. 105ರ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ

**ಹಾಜರಿದ್ದ ಅಧಿಕಾರಿ/ನೌಕರರು:–**

1) ಶ್ರೀಮತಿ. ಎನ್. ಅನ್ನಪೂರ್ಣ, ವೈಧ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಅಗ್ರಹಾರ ದಾಸರಹಳ್ಳಿ.
2) ಶ್ರೀ ತೀರ್ಥಪ್ರಸಾದ್, ಎಇಇ, ಘನತ್ಯಾಜ್ಯ ವಿಭಾಗ
3) ಶ್ರೀ ರೇಣುಕಾ ಪ್ರಸಾದ್. ಎ.ಆರ್.ಒ
4) ಶ್ರೀ ರಾಜೇಂದ್ರ ಕಂದಾಯ ಪರಿವೀಕ್ಷಕರು.
5) ಶ್ರೀ. ಅರುಣ್‌ಕುಮಾರ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ ವಾರ್ಡ್ ನಂ. 105
6) ಶ್ರೀ ನಾಗರಾಜ್. ಕೆ.ಬಿ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್‌ಬಿ
7) ಶ್ರೀ ಆನಂದ್, ಹೆಚ್.ವಿ, ಸಹಾಯಕ ಅಭಿಯಂತರರು, ಬೆಸ್ಕಾಂ
8) ಶ್ರೀ ನಾಗಣ್ಣಗೌಡ, ಹಿರಿಯ ಆರೋಗ್ಯ ಪರಿವೀಕ್ಷಕರು
9) ಶ್ರೀ ರಂಗನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
10) ಶ್ರೀ ಸೈಯದ್ ಜಮೀಲ್, ಕಿರಿಯ ಅಭಿಯಂತರರು, ಬೀದಿ ದೀಪಗಳು
11) ಶ್ರೀ ವಿನೋದ್ ಎಂ, ವಾರ್ಡ್ ಮಾರ್ಷಲ್

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದವರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಸಭೆಯಲ್ಲಿ ಈ ಹಿಂದೆ ಕೈಗೊಂಡ ನಿರ್ಣಯಗಳ ಬಗ್ಗೆ ಚರ್ಚಿಸಲಾಯಿತು.
- ಬಸವೇಶ್ವರನಗರ ಪೊಲೀಸ್ ಠಾಣೆ ಹಿಂಭಾಗ ಇರುವ ಡೆಬ್ರಿಸ್ ಗಳನ್ನು ತೆರವುಗೊಳಿಸುವಂತೆ ಸಂಘ-ಸಂಸ್ಥೆಯವರು ತಿಳಿಸಿದ್ದು, ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಅಧ್ಯಕ್ಷರು ಸಹಾಯಕ ಅಭಿಯಂತರರಿಗೆ ಸೂಚಿಸಿದರು.

- ಬಸವವನ, ನಂದನವನ ಹಾಗೂ ವಿವೇಕಾನಂದ ಪಾರ್ಕ್ ಸುತ್ತಲೂ ನಿಲ್ಲಿಸಿರುವ ಬೈಕ್‌ಗಳನ್ನು ಕಳವು ಮಾಡಲಾಗುತ್ತಿದೆ ಎಂದು ಸಂಘ ಸಂಸ್ಥೆಯ ಪ್ರತಿನಿಧಿಗಳು ಅಧ್ಯಕ್ಷರಲ್ಲಿ ತಿಳಿಸಿ ಪಾರ್ಕ್ ಸುತ್ತಲೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವಂತೆ ಮನವಿ ಮಾಡಿರುತ್ತಾರೆ ಅದರಂತೆ ಅಧ್ಯಕ್ಷರು ಸಹಾಯಕ ಅಭಿಯಂತರರಿಗೆ ಕೂಡಲೇ ಕ್ರಮ ಕೈಗೊಳ್ಳಲು ತಿಳಿಸಿರುತ್ತಾರೆ.

- ವಾರ್ಡ್ ವ್ಯಾಪ್ತಿಯಲ್ಲಿ ಪೊಲೀಸ್ ಚೌಕಿ ನಿರ್ಮಿಸುವಂತೆ ಸಂಘ-ಸಂಸ್ಥೆಯವರು ತಿಳಿಸಿದ್ದು, ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಅಧ್ಯಕ್ಷರು ತಿಳಿಸಿರುತ್ತಾರೆ.

- ವಾರ್ಡ್ ಕಚೇರಿ ರಸ್ತೆಯಲ್ಲಿ ಒಣಗಿರುವ ಮರಗಳನ್ನು ತೆರವುಗೊಳಿಸುವಂತೆ ಮನವಿ ಸಲ್ಲಿಸಿದ್ದು ಕೂಡಲೇ ಅಧ್ಯಕ್ಷರು ಶ್ರೀ ಶಿವರಾಮ, ಆರ್ ಎಫ್ ಓ ಅವರಿಗೆ ಫೋನ್ ಮುಖಾಂತರ ಸಂಪರ್ಕಿಸಿ ಕೂಡಲೇ ತೆರವುಗೊಳಿಸುವಂತೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ನಿರ್ಮಾಣವಾಗಿರುವ ರಸ್ತೆಗುಂಡಿಗಳನ್ನು ಶೀಘ್ರವಾಗಿ ಮುಚ್ಚುವಂತೆ ಮಾನ್ಯ ಅಧ್ಯಕ್ಷರು ಸಹಾಯಕ ಅಭಿಯಂತರರಿಗೆ ತಿಳಿಸಿದರು.

- ಸಭೆಯಲ್ಲಿ ಡಾ// ಅನ್ನಪೂರ್ಣ, ಪ್ರಾಥಮಿಕ ಆರೋಗ್ಯ ಕೇಂದ್ರ ಅಗ್ರಹಾರ ದಾಸರಹಳ್ಳಿ ವೈದ್ಯರು ಹಾಜರಿದ್ದು ಕೋವಿಡ್ ವರದಿಯನ್ನು ಮಾನ್ಯ ಅಧ್ಯಕ್ಷರಿಗೆ ನೀಡಿರುತ್ತಾರೆ. ಅದರಂತೆ ಶೇಕಡ 90ರಷ್ಟು ಮೊದಲನೇ ಕೋವಿಡ್ ಲಸಿಕೆ ನೀಡಿರುವುದಾಗಿ ಮತ್ತು ಎರಡನೇ ಲಸಿಕೆ ಸುಮಾರು 2500 ಜನರಿಗೆ ಬಾಕಿ ಇರುವುದಾಗಿ ತಿಳಿಸಿರುತ್ತಾರೆ. ಹಾಗೂ ಇದುವರೆಗೂ ಸುಮಾರು 4 ಸಕ್ರಿಯ ಪ್ರಕರಣಗಳಿದ್ದು ಎಲ್ಲರೂ ಹೋಂ ಐಸೋಲೇಶನ್ ನಲ್ಲಿ ಇದ್ದು ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ ಎಂದು ವೈದ್ಯರು ತಿಳಿಸಿರುತ್ತಾರೆ ಸಂಘ ಸಂಸ್ಥೆಯವರು ಜನರು ಕೋವಿಡ್ ಲಸಿಕೆ ಹಾಕಿಸಿಕೊಳ್ಳುವಂತೆ ಮಾಡಲು ಸಹಕರಿಸಬೇಕೆಂದು ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ

- ಮಾನ್ಯ ಅಧ್ಯಕ್ಷರು ಮಾತನಾಡಿ ಪ್ರತಿ ದಿನ ಸುಮಾರು 500 ರಿಂದ 600 ಜನರಿಗೆ ಕೋವಿಡ್ ಲಸಿಕೆ ನೀಡಬೇಕೆಂದು ವೈದ್ಯರಿಗೆ ತಿಳಿಸಿರುತ್ತಾರೆ. ಆದರೆ ಪ್ರತಿ ದಿನ ಸುಮಾರು 200 ಲಸಿಕೆ ನೀಡುತ್ತಿರುವುದಾಗಿ ತಿಳಿಸಿರುತ್ತಾರೆ.

- ಸಭೆಯಲ್ಲಿ ಅಗ್ರಹಾರ ದಾಸರಹಳ್ಳಿ ನಿವಾಸಿಗಳು ಹಾಜರಿದ್ದು ಬೀದಿದೀಪಗಳು ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ ಎಂದು ತಿಳಿಸಿರುತ್ತಾರೆ ಕೂಡಲೇ ಅಧ್ಯಕ್ಷರು ಶ್ರೀ ಸೈಯದ್ ಜಮೀರ್ , ಕಿರಿಯ ಅಭಿಯಂತರರು (ಎಲೆಕ್ಟ್ರಿಕಲ್ಸ್ ) ಅವರನ್ನು ಸಂಪರ್ಕಿಸಿ ಕೂಡಲೇ ಸರಿಪಡಿಸುವಂತೆ ತಿಳಿಸಿರುತ್ತಾರೆ.

- ಮಾನ್ಯ ಅಧ್ಯಕ್ಷರು ಮಾತನಾಡಿ ವಾರ್ಡ್ ಮಾರ್ಷಲ್‌ಗಳು ಪ್ರತಿದಿನ ಕಸದ ಸ್ಥಳಗಳನ್ನು ಪರಿಶೀಲಿಸಿ ಎಲ್ಲೆಂದರಲ್ಲಿ ಕಸ ಬಿಸಾಡುವವರ ಮೇಲೆ ದಂಡ ವಿಧಿಸಬೇಕೆಂದು ತಿಳಿಸಿದರು ಹಾಗೂ ಬ್ಲಾಕ್ ಸ್ಪಾಟ್ ಮತ್ತು ಡಂಪಿಂಗ್ ಯಾರ್ಡ್ ಗಳನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತಾಜ್ಯ) ರವರು ಪರಿಶೀಲಿಸಬೇಕೆಂದು ತಿಳಿಸಿದರು

- ಸಭೆಯಲ್ಲಿ ಬಿಡಬ್ಲ್ಯೂಎಸ್ಎಸಬಿ ಅಧಿಕಾರಿಗಳು ಹಾಜರಿದ್ದು, ಬಸವೇಶ್ವರ ನಗರ ಪೊಲೀಸ್ ಠಾಣೆ ಹಿಂಭಾಗ ಸಬ್ ಲೈನ್ ಕಾಮಗಾರಿ ಅವಶ್ಯವಿದ್ದು, ಕೈಗೊಳ್ಳುವುದಾಗಿ ತಿಳಿಸಿರುತ್ತಾರೆ ಮಾನ್ಯ ಅಧ್ಯಕ್ಷರು ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರ ರಿಗೆ ತಿಳಿಸಿರುತ್ತಾರೆ.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಳ್ಳಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸುಲು ಸೂಚಿಸಿ ಮುಂದಿನ ಸಭೆಗೆ ಎಲ್ಲಾ ಅಧಿಕಾರಿ ಸಿಬ್ಬಂದಿಗಳು ಹಾಜರಿರಲು ತಿಳಿಸಿ ಸಭೆಯನ್ನು ಮುಕ್ತಾಯ ಮಾಡಿದರು.

20/11/2021

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 105 ಅಗ್ರಹಾರ ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

20/11/21

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್ ನೋಡಲ್ ಅಧಿಕಾರಿಗಳು
ವಾರ್ಡ್ ನಂ. 105 ಅಗ್ರಹಾರ ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:-**

1) ಮಾನ್ಯಆಯುಕ್ತರುರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸದೆ.
4) ಜಂಟಿಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
6) ಅಧೀಕ್ಷಕಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸದೆ.
7) ಕಾರ್ಯಪಾಲಕಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸದೆ.
8) ಸಹಾಯಕಕಾರ್ಯಪಾಲಕಅಭಿಯಂತರರು, ಬೆಸ್ಕಾಂ ರವರ ಮಾಹಿತಿಗಾಗಿ ಕಳುಹಿಸಿದೆ.
9) ಸಹಾಯಕಕಾರ್ಯಪಾಲಕಅಭಿಯಂತರರು, ಬಿ.ಡಬ್ಲ್ಯೂಎಸ್.ಎಸ್.ಬಿ ರವರ ಮಾಹಿತಿಗಾಗಿ ಕಳುಹಿಸಿದೆ